**<u>ದಿನಾಂಕ 26.03.2026 ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 18** ಎಂದು, ನೇಮಕಾತಿ ಆದೇಶ ಪತ್ರದ ಧೃಡಿಕೃತ ಪ್ರತಿಯನ್ನು **ನಿಪಿ 19** ಎಂದು, ವೇತನ ಪಟ್ಟಿಗಳ ಧೃಡಿಕೃತ ಪ್ರತಿಗಳನ್ನು **ನಿಪಿ 20** ಎಂದು ಗುರುತಿಸಲಾಯಿತು.

1ನೇ ಎದುರುದಾರರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ಮೃತ ವ್ಯಕ್ತಿ 2023ರಿಂದ ನಮ್ಮ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಮೃತನ ವೇತನದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿದ್ದು, ಅದರಲ್ಲಿ ವಿವರಗಳು ನಮೂದು ಇದೆ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿಸಿ ಹಾಜರುಪಡಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ 20 ರಲ್ಲಿ ನಮೂದಿಸಿರುವ ಕಡಿತಗಳನ್ನು ಮೃತನ ವೇತನದಿಂದಲೇ ಪಾವತಿಸಲಾಗಿರುತ್ತದೆ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**